(156)

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರ ನಿಯಮ 72ರಡಿ ಗಮನ ಸೆಳೆಯುವ ಸೂಚನೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ

ಪ್ರಶ್ನೆ:

ತುಳುವು ದ್ರಾವಿಡ ಭಾಷಾ ವರ್ಗಕ್ಕೆ ಸೇರಿದ ಪಂಚ ದ್ರಾವಿಡ ಭಾಷೆಗಳಲ್ಲಿ ಒಂದು ಪ್ರಮುಖ ಭಾಷೆ. ಸುಮಾರು 2000 ವರ್ಷಗಳ ಹಿಂದೆ ಮೂಲ ದ್ರಾವಿಡದಿಂದ ಪ್ರತ್ಯೇಕಗೊಂಡ ಸ್ವತಂತ್ರವಾದ ಭಾಷೆಯಾಗಿದೆ. ತುಳು ಭಾಷೆಯನ್ನು ಮಾತಾಡುವವರು ಪ್ರಧಾನವಾಗಿ ಈಗಿನ ಕರ್ನಾಟಕದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮತ್ತು ಕೇರಳದ ಕಾಸರಗೋಡು ಜಿಲ್ಲೆಯಲ್ಲಿ ಇದ್ದು ಎಲ್ಲಾ ಜಾತಿ ಮತ್ತು ಧರ್ಮದವರ ಭಾಷೆಯಾಗಿದೆ.

ತುಳುವಿಗೆ ತನ್ನದೇ ಆದ ಪ್ರತ್ಯೇಕ ಲಿಪಿ ಇದೆ. ದ್ವೈತ ಸಿದ್ಧಾಂತದ ಪ್ರತಿಪಾದಕರಾದ ಮಧ್ವಾಚಾರ್ಯರು ತುಳು ಲಿಪಿಯಲ್ಲೇ ಸಹಿ ಮಾಡುತ್ತಿದ್ದ ಉಲ್ಲೇಖವಿದ್ದು, ತುಳು ಲಿಪಿ ಮತ್ತು ಪ್ರಾಚೀನ ತುಳು ಸಾಹಿತ್ಯಕ್ಕೆ ಸುಮಾರು 600 ವರ್ಷಗಳ ಇತಿಹಾಸವಿದೆ. ಕರ್ನಾಟಕ ಸರ್ಕಾರವು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಶಾಲೆಗಳಲ್ಲಿ ತುಳುವನ್ನು ಐಚ್ಛಿಕವಾಗಿ ಮೂರನೆಯ ಭಾಷೆಯಾಗಿ ಕಲಿಯಲು 2010ರ ಮಾರ್ಚ್‌ನಲ್ಲಿ ಆದೇಶ ಹೊರಡಿಸಿದೆ.

1994ರಲ್ಲಿ ಕರ್ನಾಟಕದಲ್ಲಿ ತುಳು ಅಕಾಡೆಮಿ ಸ್ಥಾಪನೆಗೊಂಡಿತು ಅದೇ ರೀತಿ ಕೇರಳ ಸರ್ಕಾರವು ಕೂಡ 2007ರಲ್ಲಿ ತುಳು ಸಾಹಿತ್ಯ ಅಕಾಡೆಮಿಯನ್ನು ಸ್ಥಾಪಿಸಿದೆ. 1992ರಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ತುಳು ಪೀಠ ಸ್ಥಾಪನೆಗೊಂಡು, ತುಳುವಿಗೆ ಸಂಬಂಧಿಸಿದ ಸಂಶೋಧನೆ, ಕಮ್ಮಟ ಮತ್ತು ಪ್ರಕಟಣೆಗಳನ್ನು ಮಾಡಿದೆ.

ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಹೆಚ್ಚುವರಿ ಅಧಿಕೃತ ಭಾಷೆಯನ್ನಾಗಿ ಘೋಷಣೆ ಮಾಡುವಂತೆ ಈಗಾಗಲೇ ಅಧ್ಯಯನ ವರದಿ ಸಮಿತಿಯು ತಮ್ಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ಆದುದರಿಂದ ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಹೆಚ್ಚುವರಿ ಅಧಿಕೃತ ಭಾಷೆಯನ್ನಾಗಿ ಘೋಷಣೆ ಮಾಡುವಂತೆ ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆದಿರುತ್ತಾರೆ.

*****

ಉತ್ತರ:

ದ್ರಾವಿಡ ಭಾಷೆಗಳಲ್ಲಿ ಒಂದಾದ ತುಳು ಭಾಷೆಯ ಏಳಿಗೆ ಹಾಗೂ ವಿಕಾಸಕ್ಕಾಗಿ ಕರ್ನಾಟಕ ಸರ್ಕಾರವು ತುಳು ಸಾಹಿತ್ಯ ಅಕಾಡೆಮಿಯನ್ನು ರಚನೆ ಮಾಡಿದೆ. ಆ ಮೂಲಕ ಕರ್ನಾಟಕ ಸ್ಥಳೀಯ ಭಾಷೆಗಳನ್ನು ಬೆಳೆಸುವ ದೃಷ್ಟಿಯಿಂದ ಕರ್ನಾಟಕ ಸರ್ಕಾರವು ವಿಶೇಷ ಗಮನ ಕೊಡುತ್ತ ಬಂದಿದೆ.

---2/--

ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಹೆಚ್ಚುವರಿ ಅಧಿಕೃತ ಭಾಷೆಯನ್ನಾಗಿ ಘೋಷಿಸುವ ಸಂಬಂಧ ಅಧ್ಯಯನ ಮಾಡಿ ವರದಿ ನೀಡಲು ಸರ್ಕಾರದ ಆದೇಶ ಸಂಖ್ಯೆ: ಕಸಂಪಾ 36 ಕೆಓಎಲ್ ಆಕ 2021, ದಿ:12.01.2023ರಲ್ಲಿ ಡಾ.ಮೋಹನ್ ಆಳ್ವಾ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯು ಶಿಫಾರಸ್ಸು ವರದಿಯನ್ನು ದಿನಾಂಕ:14.02.2023ರಂದು ಸಲ್ಲಿಸಿರುತ್ತದೆ. ಸದರಿ ವರದಿಯಲ್ಲಿನ ಪ್ರಮುಖ ಅಂಶಗಳ ಬಗ್ಗೆ ಹಲವು ಇಲಾಖೆಗಳ ಅಭಿಪ್ರಾಯಗಳನ್ನು ಪಡೆಯಬೇಕಾಗಿದ್ದು ಸದರಿ ವರದಿ ನಿರೀಕ್ಷಿಸಲಾಗಿದೆ. ಅಭಿಪ್ರಾಯ ವರದಿ ಸ್ವೀಕೃತವಾದ ನಂತರ ಪರಿಶೀಲಿಸಲಾಗುವುದು.

**ಕಸಂಪಾ 73 ಕೆಓಎಲ್ ಆಕ 2023**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು